ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/197(01)/2023–24

ದಿನಾಂಕ.13.02.2026

## ಸುತ್ತೋಲೆ

ವಿಷಯ: ಸರ್ಕಾರದ ಕಾರ್ಯಕ್ರಮಗಳು ಹಾಗೂ ಸಮಾರಂಭಗಳಲ್ಲಿ KMF ನ 'ನಂದಿನಿ' ಉತ್ಪನ್ನಗಳ ಬಳಕೆ ಮತ್ತು ಪರಿಸರ ಸ್ನೇಹಿ ಕ್ರಮಗಳ ಅಳವಡಿಕೆ ಕುರಿತು.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು ಇವರ ಪತ್ರ ಸಂಖ್ಯೆ.ಸಿಆಸುಇ 262 ರಾಸಾ 2025, ದಿನಾಂಕ.31.01.2026.

****

ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು ಇವರು ರಾಜ್ಯಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ಪರಿಸರ ಸ್ನೇಹಿ ಕ್ರಮಗಳನ್ನು ಅಳವಡಿಸಿಕೊಳ್ಳುವ ದೃಷ್ಟಿಯಿಂದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸರ್ಕಾರಿ ಸಭೆ ಸಮಾರಂಭಗಳಲ್ಲಿ ಕುಡಿಯುವ ನೀರಿನ ಪ್ಲಾಸ್ಟಿಕ್ ಬಾಟಲ್‌ಗಳ ಬದಲಾಗಿ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಿದ ಪರಿಕರಗಳನ್ನು ಬಳಸುವಂತೆ ಹಾಗೂ ಕರ್ನಾಟಕ ಸರ್ಕಾರದ ಎಲ್ಲ ಕಾರ್ಯಕ್ರಮ/ಕಛೇರಿಗಳ ಸಭೆಗಳಲ್ಲಿ ಕರ್ನಾಟಕ ಮಿಲ್ಕ್ ಫೆಡರೇಶನ್(KMF) ನಂದಿನಿ ತಿನಿಸುಗಳನ್ನು ಬಳಸುವಂತೆ ತಿಳಿಸಿರುತ್ತಾರೆ.

ಆದುದರಿಂದ, ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಭಾಗ/ಕಛೇರಿಗಳಲ್ಲಿ ಆಯೋಜಿಸುವ ಸಭೆ ಹಾಗೂ ಕಾರ್ಯಕ್ರಮಗಳಿಗೆ ತಿನಿಸುಗಳನ್ನು ಖರೀದಿಸುವಾಗ ಕರ್ನಾಟಕ ಮಿಲ್ಕ್ ಫೆಡರೇಶನ್(KMF) ಉತ್ಪಾದಿಸುವ ನಂದಿನಿ ಉತ್ಪನ್ನಗಳನ್ನು ಕಡ್ಡಾಯವಾಗಿ ಬಳಸಲು ಹಾಗೂ ಎಲ್ಲಾ ಕಛೇರಿಗಳಲ್ಲಿ ಮತ್ತು ಸರ್ಕಾರಿ ಸಭೆ ಸಮಾರಂಭಗಳಲ್ಲಿ ಕುಡಿಯುವ ನೀರಿನ ಪ್ಲಾಸ್ಟಿಕ್ ಬಾಟಲ್‌ಗಳ ಬದಲಾಗಿ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಿದ ಪರಿಕರಗಳನ್ನು ಬಳಸುವಂತೆ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

**ಪ್ರತಿಗಳು:**

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು, ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು, ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

(1–6) ಸದರಿ ಸುತ್ತೋಲೆಯನ್ನು ತಮ್ಮ ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಪಾಲಿಸುವುದು.

7. ಸಂಯೋಜಕರು, ಐ.ಸಿ.ಡಿ, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
8. ಮಾನ್ಯ ಕುಲಪತಿಯವರ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ.